ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇ.ವಿ.–1/ವ್ಯಸಂ/197/2023–24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು–560001.
ದಿನಾಂಕ: 28.02.2024.

## ಅಧಿಕೃತ ಜ್ಞಾಪನ

ವಿಷಯ: ಅನ್ಯ ಕಾರ್ಯ ನಿಮಿತ್ತ ಮಂಜೂರು ಮಾಡುವ ಕುರಿತು.

* * * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:29.02.2024 ರಂದು ವೃತ್ತಿ ಪದೋನ್ನತಿ ಹೊಂದಿರುವ ಅಧ್ಯಾಪಕರುಗಳಿಗೆ ಅಭಿನಂದನಾ ಸಮಾರಂಭ **"ವೃತ್ತಿ ಸಂಭ್ರಮ"** ವನ್ನು ಕಾಲೇಜು ಶಿಕ್ಷಣ ಇಲಾಖಾ ವತಿಯಿಂದ ಬೆಳಿಗ್ಗೆ 10.00 ಗಂಟೆಗೆ ಬೆಂಗಳೂರಿನ ಜ್ಞಾನ ಜ್ಯೋತಿ ಸಭಾಂಗಣ, ಸೆಂಟ್ರಲ್ ಕಾಲೇಜಿನ ಆವರಣ ಇಲ್ಲಿ ಹಮ್ಮಿಕೊಳ್ಳಲಾಗಿದ್ದು, ಸದರಿ ಕಾರ್ಯಕ್ರಮಕ್ಕೆ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಇತರ ಸಚಿವರುಗಳು ಪಾಲ್ಗೊಳ್ಳುತ್ತಿರುವುದರಿಂದ ಈ ಕಾರ್ಯಕ್ರಮಕ್ಕೆ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಹಾಗೂ ರಾಜ್ಯದ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಭಾಗವಹಿಸುವ ಅಧ್ಯಾಪಕರುಗಳಿಗೆ ಅನುಮತಿ ನೀಡಲಾಗಿದೆ.

ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಅಧ್ಯಾಪಕರುಗಳು ಸಂಬಂಧಿಸಿದ ಅಧಿಕಾರಿಗಳಿಗೆ ಹಾಜರಾತಿ ಪ್ರಮಾಣ ಪತ್ರವನ್ನು ಒಪ್ಪಿಸುವ ಷರತ್ತಿಗೊಳಪಟ್ಟು ಅನ್ಯಕಾರ್ಯನಿಮಿತ್ತ ಮಂಜೂರು ಮಾಡಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:
1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2. ರಾಜ್ಯದ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

ಪ್ರತಿಯನ್ನು:
1. ಆಯುಕ್ತರ, ನಿರ್ದೇಶಕರ, ಮುಖ್ಯಾಡಳಿತಾಧಿಕಾರಿಗಳ, ಹೆಚ್ಚುವರಿ ನಿರ್ದೇಶಕರ, ಜಂಟಿ ನಿರ್ದೇಶಕರುಗಳ ಆಪ್ತ ಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು.
2. ಕಛೇರಿ ಪ್ರತಿ.